ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ರಾಜ್ಯಪಾಲರು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 20/4/2021

# ರಾಜ್ಯಪಾಲರಿಂದ ಇಂದು ಮೊದಲ ಸರ್ವಪಕ್ಷ ಸಭೆ

## ಕೋವಿಡ್ ನಿಗ್ರಹ ಕುರಿತು ಸಮಾಲೋಚನೆ

## ಸಿಎಂ ಕೂಡ ಆಸ್ಪತ್ರೆಯಿಂದ ಸಭೆಯಲ್ಲಿ ಭಾಗಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 20/4/21

ರಾಜ್ಯದಲ್ಲಿ ಕೋವಿಡ್ 2ನೇ ಅಲೆ ವ್ಯಾಪಕವಾಗಿ ಹಬ್ಬುತ್ತಿರುವ ಹಿನ್ನೆಲೆಯಲ್ಲಿ ಕೊರೋನಾ ನಿಯಂತ್ರಣಕ್ಕೆ ಕಟ್ಟುನಿಟ್ಟಿನ ಮಾರ್ಗೋಪಾಯ ಕುರಿತು ಚರ್ಚಿಸಲು ಮಂಗಳವಾರ ಮಹತ್ವದ ಸರ್ವ ಪಕ್ಷಗಳ ಸಭೆ ಕರೆಯಲಾಗಿದ್ದು, ಇದೇ ಮೊದಲ ಬಾರಿಗೆ ರಾಜ್ಯಪಾಲ ವಜುಭಾಯ್ ವಾಲಾ ಅವರು ಅಧ್ಯಕ್ಷತೆ ವಹಿಸಲಿದ್ದಾರೆ.



ಸಿಎಂ ಬಿ.ಎಸ್. ಯಡಿಯೂರಪ್ಪ ಅವರು ಕೊರೋನಾ ಸೋಂಕಿಗೊಳಗಾಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಕಾರಣ ರಾಜ್ಯಪಾಲರ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದೆ. ಸಿಎಂ ಸಹ ಸಭೆಯಲ್ಲಿ ಭಾಗವಹಿಸಲಿದ್ದಾರೆ. ವರ್ಚುವಲ್ ಮೂಲಕ ಮಂಗಳವಾರ ಸಂಜೆ 4.30ಕ್ಕೆ ಸರ್ವಪಕ್ಷ ಸಭೆ ನಡೆಯಲಿದೆ. ಗೃಹ ಸಚಿವ ಬಸವರಾಜ್ ಬೊಮ್ಮಾಯಿ, ಕಂದಾಯ ಸಚಿವ ಅಶೋಕ್, ಆರೋಗ್ಯ ಸಚಿವ ಡಾ.ಕೆ.ಸುಧಾಕರ್, ಪ್ರತಿಪಕ್ಷ ನಾಯಕರಾದ ಸಿದ್ದರಾಮಯ್ಯ, ಎಸ್.ಆರ್ .ಪಾಟೀಲ್, ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ, ಜೆಡಿಎಸ್ ರಾಜ್ಯಾಧ್ಯಕ್ಷ ಎಚ್.ಕೆ.ಕುಮಾರಸ್ವಾಮಿ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಇತರರು ಪಾಲ್ಗೊಳ್ಳಲಿದ್ದಾರೆ.